ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1149
2. ಸದಸ್ಯರ ಹೆಸರು : ಡಾ: ತೇಜಸ್ವಿನಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 20-12-2018
4. ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ | ಕೇಳಿರುವ ಪ್ರಶ್ನೆ | ಉತ್ತರ |
|---|---|---|
| 1) | ರಾಜ್ಯದ ಅಭಿವೃದ್ಧಿಗೆ ಸಮಗ್ರ ಯೋಜನೆ ರೂಪಿಸುವಾಗ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತದೆ: | ರಾಜ್ಯದ ಅಭಿವೃದ್ಧಿಗೆ ಸಮಗ್ರ ಯೋಜನೆ ರೂಪಿಸುವಾಗ ಪ್ರಾದೇಶಿಕ ಅಸಮತೋಲನೆಯನ್ನು ಸರಿಪಡಿಸಲು ಕ್ರಮವಹಿಸಲಾಗುತ್ತದೆ. ಭೌತಿಕ ಮೂಲಭೂತ ಸೌಕರ್ಯಗಳು ಹಾಗೂ ಮಾನವ ಅಭಿವೃದ್ಧಿಯ ಮಾನದಂಡಗಳು (ಶಿಕ್ಷಣ, ಆರೋಗ್ಯ, ಉದ್ಯೋಗ, ಆದಾಯ, ಕುಡಿಯುವ ನೀರು, ನೈರ್ಮಲ್ಯ, ಜನರ ಜೀವನಮಟ್ಟ ಮುಂತಾದ ಕ್ಷೇತ್ರಗಳಲ್ಲಿ) ರಾಷ್ಟ್ರಮಟ್ಟದ ಹಾಗೂ ರಾಜ್ಯ ಮಟ್ಟದ ಸರಾಸರಿ ಅಭಿವೃದ್ಧಿ ಸೂಚ್ಯಂಕಗಳನ್ನು ಆಧರಿಸಿ ರಾಜ್ಯದ ಅಭಿವೃದ್ಧಿಗೆ ಸಮಗ್ರ ಯೋಜನೆ ರೂಪಿಸಲಾಗುತ್ತಿದೆ. ಉದಾಹರಣೆಗೆ ಡಾ. ಡಿ.ಎಂ. ನಂಜುಂಡಪ್ಪನವರ ಪ್ರಾದೇಶಿಕ ಅಸಮತೋಲನ ನಿವಾರಣಾ ವರದಿಯಲ್ಲಿ 35 ಸೂಚ್ಯಂಕಗಳನ್ನು ಬಳಸಲಾಗಿದೆ. ಇತ್ತೀಚೆಗೆ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಆಧರಿಸಿ ಸಮಗ್ರ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲಾಗುತ್ತಿದೆ. |
| 2) | ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಅತ್ಯುತ್ತಮ ಕಟ್ಟಡದ ನಿರ್ಮಾಣ, ಗ್ರಾಮಗಳಿಗೆ ಪರಿಪೂರ್ಣ ಶುದ್ಧ ಕುಡಿಯುವ ನೀರಿನ ಪೂರೈಕೆ, ನ್ಯಾಯಾಲಯಗಳಿಗೆ ಉತ್ತಮ ಕಟ್ಟಡ ನಿರ್ಮಾಣ, ಗ್ರಾಮೀಣ ವಿದ್ಯಾರ್ಥಿನಿಲಯ ನಿರ್ಮಾಣ, ಗ್ರಾಮಗಳಿಗೆ ಸುರಕ್ಷಿತ ಗುಣಮಟ್ಟದ ರಸ್ತೆ ನಿರ್ಮಾಣ ಹೀಗೆ ರಾಜ್ಯದಾದ್ಯಂತ ಏಕಕಾಲಕ್ಕೆ ಒಂದು ಯೋಜನೆಯನ್ನು ಜಾರಿ ಗೊಳಿಸುವಂತೆ ಆಯವ್ಯಯದಲ್ಲಿ ಯೋಜನೆ ತರಲಾಗುತ್ತಿದೆಯೇ? | ಹೌದು. ವಿವಿಧ ಇಲಾಖೆಗಳಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಅತ್ಯುತ್ತಮ ಕಟ್ಟಡ ನಿರ್ಮಾಣ, ಗ್ರಾಮಗಳಿಗೆ ಪರಿಪೂರ್ಣ ಶುದ್ಧ ಕುಡಿಯುವ ನೀರಿನ ಪೂರೈಕೆ, ನ್ಯಾಯಾಲಯಗಳಿಗೆ ಉತ್ತಮ ಕಟ್ಟಡ ನಿರ್ಮಾಣ, ಗ್ರಾಮೀಣ ವಿದ್ಯಾರ್ಥಿನಿಲಯ ನಿರ್ಮಾಣ, ಗ್ರಾಮಗಳಿಗೆ ಸುರಕ್ಷಿತ ಗುಣಮಟ್ಟದ ರಸ್ತೆ ನಿರ್ಮಾಣ ಇವುಗಳಿಗೆ ಸಂಬಂಧಿಸಿದಂತೆ ರಾಜ್ಯದ ವಿವಿಧ ಪ್ರದೇಶಗಳಲ್ಲಿ ಆವಶ್ಯಕತೆಗೆ ಅನುಗುಣವಾಗಿ ಹಾಗೂ ಆಯವ್ಯಯ ಲಭ್ಯತೆಯಂತೆ ಯೋಜನೆಗಳನ್ನು ಗ್ರಾಮ ಪಂಚಾಯತ್, ತಾಲ್ಲೂಕ ಪಂಚಾಯತ್, ಜಿಲ್ಲಾ ಪಂಚಾಯತ್ ಮಟ್ಟಗಳಲ್ಲಿ ರೂಪಿಸಿ ರಾಜ್ಯ ಮಟ್ಟದಲ್ಲಿ ಕ್ರೂಢೀಕರಿಸಲಾಗುತ್ತದೆ. ಉದಾ: ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ 114 ಹಿಂದುಳಿದ ತಾಲ್ಲೂಕಗಳಿಗೆ, ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (HKRDB), ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಇತ್ಯಾದಿ., ಈ ಎಲ್ಲ ಕ್ಷೇತ್ರಗಳಲ್ಲಿ ಏಕಕಾಲಕ್ಕೆ ಒಂದು ಯೋಜನೆಯನ್ನು ಜಾರಿಗೊಳಿಸುವಂತೆ ಆಯವ್ಯಯದಲ್ಲಿ ಅವಕಾಶ ಮಾಡಲಾಗಿದೆ. |

ಸಂಖ್ಯೆ:ಪಿಡಿ 25 ಪಿಎಫ್‌ಡಿ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ